# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ, ಗಲಗಲಿ ಗ್ರಾಮದ ಹತ್ತಿರ ಬೀಳಗಿ ಶಾಖೆ ಮತ್ತು ದಕ್ಷಿಣ ಶಾಖೆಯ ಕೃಷ್ಣಾ ನದಿಯಿಂದ ನೀರನ್ನೆತ್ತಿ, ಘಟಪ್ರಭಾ ಎಡದಂಡೆ ಕಾಲುವೆ ಕಿ.ಮೀ. 103.00 ರಿಂದ ಕಿ.ಮೀ 109.00 (TE) ವರೆಗೆ ನೀರಾವರಿ ವಂಚಿತ ಪ್ರದೇಶಕ್ಕೆ ನೀರಾವರಿ ಒದಗಿಸಲು, ಮಂಟೂರು ಮಹಾಲಕ್ಷ್ಮಿ ಏತ ನೀರಾವರಿ ಯೋಜನೆಯ ರೂ 228.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

******

**ಓದಲಾಗಿದೆ:**

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರಪತ್ರಸಂಖ್ಯೆ:ಕನೀನಿ/ಟಿಜಿಸಿ/ಮಂಟೂರ-ಮಹಾಲಕ್ಷ್ಮಿ/1398/2021-22/4850 ದಿನಾಂಕ:14.12.2021.
2) ಕರ್ನಾಟಕ ನೀರಾವರಿ ನಿಗಮದ ಇ-ಮೇಲ್ ದಿನಾಂಕ:27.01.2022

**ಪ್ರಸ್ತಾವನೆ:**

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರು ಮೇಲೆ ಓದಲಾದ (1) ರ ಪತ್ರದಲ್ಲಿ ಘಟಪ್ರಭಾ ನದಿಗೆ ಅಡ್ಡಲಾಗಿ ಹಿಡಕಲ್ ಅಣೆಕಟ್ಟಿನ ಎರಡೂ ದಡಗಳಲ್ಲಿ ಎರಡು ಮುಖ್ಯ ಕಾಲುವೆಗಳೊಂದಿಗೆ ನೀರಿನ ಶೇಖರಣಾ ಅಣೆಕಟ್ಟನ್ನು ನಿರ್ಮಾಣ ಮಾಡಲು, ಘಟಪ್ರಭಾ ಯೋಜನೆಯನ್ನು ಯೋಜಿಸಲಾಗಿದೆ; ಘಟಪ್ರಭಾ ಎಡದಂಡೆ ಕಾಲುವೆಯು ಹಿಡಕಲ್ ಅಣೆಕಟ್ಟಿನ 20.00 ಕಿಲೋಮೀಟರ್ ಕೆಳಗಿರುವ ಧೂಪದಾಳ ವಿಯರ್ ನಿಂದ ಪ್ರಾರಂಭಗೊಂಡು ಮತ್ತು ಅಂತಿಮವಾಗಿ ಬೆಳಗಾವಿ ಜಿಲ್ಲೆ ಮತ್ತು ಬಾಗಲಕೋಟೆ ಜಿಲ್ಲೆಗಳ 1.62 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ; ಘಟಪ್ರಭಾ ಬಲದಂಡೆ ಕಾಲುವೆ ಹಿಡಕಲ್ ಅಣೆಕಟ್ಟೆಯಿಂದಲೇ ಪ್ರಾರಂಭಗೊಂಡು ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ 1.56 ಲಕ್ಷ ಹೆಕ್ಟೇರ್‌ಗೆ ನೀರಾವರಿ ಒದಗಿಸಲಾಗುವುದರಿಂದ ಈ ಯೋಜನೆಯನ್ನು ಮೂರು ಹಂತಗಳಲ್ಲಿ ಕಾರ್ಯಗತಗೊಳಿಸಲಾಗುತ್ತಿದೆ ಎಂದು ವರದಿ ಮಾಡಿರುತ್ತಾರೆ.

...2

ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ, ಗಲಗಲಿ ಗ್ರಾಮದ ಹತ್ತಿರ ಬೀಳಗಿ ಶಾಖೆ ಮತ್ತು ದಕ್ಷಿಣ ಶಾಖೆಯ ಕೃಷ್ಣಾ ನದಿಯಿಂದ ನೀರನ್ನೆತ್ತಿ, ಘಟಪ್ರಭಾ ಎಡದಂಡೆ ಕಾಲುವೆ ಕಿ.ಮೀ. 103.00 ರಿಂದ ಕಿ.ಮೀ 109.00 (TE) ವರೆಗೆ ನೀರಾವರಿ ವಂಚಿತ ಪ್ರದೇಶಕ್ಕೆ ನೀರಾವರಿ ಒದಗಿಸಲು, ಮಂಟೂರು ಮಹಾಲಕ್ಷ್ಮೀ ಏತ ನೀರಾವರಿ ಯೋಜನೆಯ ರೂ. 228.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ

ಮೇಲೆ ಓದಲಾದ (1) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಸದರಿ ಪ್ರಸ್ತಾವನೆಯನ್ನು ದಿನಾಂಕ: 10.12.2021ರಂದು ಜರುಗಿದ 86ನೇ ನಿಗಮದ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿ, ಸದರಿ ಸಮಿತಿಯು ಕೆಲವೊಂದು ಅಂಶಗಳನ್ನು ಅಳವಡಿಸಿಕೊಳ್ಳುವ ಷರತಿಗೊಳಪಟ್ಟು ತೀರುವಳಿ ನೀಡಿ, ನಿಗಮದ ಮಂಡಳಿಯ ಮುಂದೆ ಮಂಡಿಸಿ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಿರುತ್ತದೆ ಎಂದು ವರದಿ ಮಾಡಿರುತ್ತಾರೆ.

ದಿನಾಂಕ:20.12.2021 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನೀರಿನ ಅಂತಿಮ ಹಂಚಿಕೆ ಹಾಗೂ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸುವ ಷರತ್ತಿಗೊಳಪಟ್ಟು ರೂ 228.00 ಕೋಟಿ ಮೊತ್ತದ ಸದರಿ ಯೋಜನೆಗೆ ಸಚಿವ ಸಂಪುಟವು ತಾತ್ವಿಕ ಅನುಮೋದನೆ ನೀಡಿದೆ.

ಮೇಲೆ ಓದಲಾದ (2)ರ ಈ-ಮೇಲ್ ಸಂದೇಶದಲ್ಲಿ, ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ, ದಿನಾಂಕ: 22.01.2022 ರಂದು ನಡೆದ ನಿಗಮದ ನಿರ್ದೇಶಕರ ಮಂಡಳಿ 97 ನೇ ಸಭೆಯಲ್ಲಿ ಈ ಯೋಜನೆಯನ್ನು 2 ಹಂತಗಳಲ್ಲಿ ಅಂದರೆ ಮೊದಲನೇ ವರ್ಷದಲ್ಲಿ 1 ನೇ ಹಂತವಾಗಿ ಹೆಡ್ ವರ್ಕ್ಸ್ ಕಾಮಗಾರಿಯನ್ನು ಕೈಗೊಳ್ಳಲು ಹಾಗೂ 2ನೇ ಹಂತವಾಗಿ ಇನ್ನುಳಿದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುವುದಾಗಿ ವರದಿ ಮಾಡಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 107 ಎನ್ಐಎನ್ 2021, ಬೆಂಗಳೂರು, ದಿನಾಂಕ: 29.01.2022.**

ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ, ಗಲಗಲಿ ಗ್ರಾಮದ ಹತ್ತಿರ ಬೀಳಗಿ ಶಾಖೆ ಮತ್ತು ದಕ್ಷಿಣ ಶಾಖೆಯ ಕೃಷ್ಣಾ ನದಿಯಿಂದ ನೀರನ್ನೆತ್ತಿ, ಘಟಪ್ರಭಾ ಎಡದಂಡೆ ಕಾಲುವೆ ಕಿ.ಮೀ. 103.00 ರಿಂದ ಕಿ.ಮೀ 109.00 (TE) ವರೆಗೆ ನೀರಾವರಿ ವಂಚಿತ ಪ್ರದೇಶಕ್ಕೆ ನೀರಾವರಿ ಒದಗಿಸಲು, ಮಂಟೂರು ಮಹಾಲಕ್ಷ್ಮಿ ಏತ ನೀರಾವರಿ ಯೋಜನೆಯ ರೂ 228.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ, ಸದರಿ ಯೋಜನೆಯ ಕಾಮಗಾರಿಗೆ ಟೆಂಡರ್ ಕರೆಯಲು ಅನುಮತಿ ನೀಡಿ, ಪ್ರಸಕ್ತ ಸಾಲಿನಲ್ಲಿ ಜಾಕ್‌ವೆಲ್ ಕಾಮಗಾರಿ ಮಾತ್ರ ಪ್ರಾರಂಭಿಸುವುದು ಹಾಗೂ 50% ಜಾಕ್‌ವೆಲ್ ಕಾಮಗಾರಿ ಪ್ರಗತಿಯ ನಂತರ ಮುಂದಿನ ಕಾಮಗಾರಿ ಪ್ರಾರಂಭಿಸುವ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ಜಯಚಂದ್ರರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲಸಂಪನ್ಮೂಲ ಇಲಾಖೆ

**ಪ್ರತಿಯನ್ನು:**

1) ಮಹಾಲೇಖಪಾಲರು (ಎ & ಇ ) ಕರ್ನಾಟಕ, ಬೆಂಗಳೂರು.
2) ಮಹಾಲೇಖಪಾಲರು (ಇ & ಆರ್ ಎಸ್ ಎ ) ಕರ್ನಾಟಕ, ಬೆಂಗಳೂರು.
3) ಮಹಾಲೇಖಪಾಲರು (ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.
4) ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
5) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ,

...4

7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
12) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
13) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ (ಉತ್ತರ) ಬೆಳಗಾವಿ.
14) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
15) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ( ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
16) ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
17) ತಾಂತ್ರಿಕ ಸಹಾಯಕರು, ಜಲಸಂನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18) ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.

******